ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ 13 ಬಿಎಲ್‌ಡಿ 2018

ಅಡಕ:

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ:07-10-2021.

:ಸುತ್ತೋಲೆ:

ವಿಷಯ: ಸರ್ಕಾರಿ ಪಾಲಿಟೆಕ್ನಿಕ್ / ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಹಸ್ತಾಂತರಗೊಂಡಿರುವ ಹಾಸ್ಟೆಲ್‌ಗಳನ್ನು ತಾತ್ಕಾಲಿಕವಾಗಿ ಸಮಾಜ ಕಲ್ಯಾಣ ಇಲಾಖೆ / ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಹಸ್ತಾಂತರಿಸಲು ಇಚ್ಚಿಸಿದಲ್ಲಿ / ಪ್ರಸ್ತಾವನೆ ಸ್ವೀಕೃತವಾಗಿದ್ದಲ್ಲಿ, ಅನುಮತಿಗೆ ಆಯುಕ್ತಾಲಯಕ್ಕೆ ಪ್ರಸ್ತಾವನೆ ಸಲ್ಲಿಸುವ ಬಗ್ಗೆ.

---------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಸರ್ಕಾರಿ ಪಾಲಿಟೆಕ್ನಿಕ್ / ಸರ್ಕಾರಿ ಇಂಜನಿಯರಿಂಗ್ ಕಾಲೇಜುಗಳಲ್ಲಿ, ಹಸ್ತಾಂತರಗೊಂಡಿರುವ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಉಚಿತ ಊಟೋಪಚಾರಗಳ ಸೌಲಭ್ಯವಿಲ್ಲದ ಕಾರಣ ವಿದ್ಯಾರ್ಥಿಗಳು ಪ್ರವೇಶಾತಿ ಹೊಂದಲು ಇಚ್ಚಿಸಿದೇ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ / ಸಮಾಜ ಕಲ್ಯಾಣ ಇಲಾಖೆಗಳಲ್ಲಿನ ವಸತಿ ನಿಲಯಗಳಿಗೆ ಪ್ರವೇಶಾತಿ ಹೊಂದುತ್ತಿದ್ದು, ಸದರಿ ಕಟ್ಟಡಗಳ ಭದ್ರತೆ ಮತ್ತು ಸ್ವಚ್ಚತೆಯ ಕಾರಣದಿಂದ ಮತ್ತು ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆಯ ಹಿತದೃಷ್ಟಿಯಿಂದ ಹಾಗೂ ನಿರ್ಮಾಣಗೊಂಡಿರುವ ಹಾಸ್ಟೆಲ್‌ಗಳನ್ನು ಸದುಪಯೋಗ ಪಡಿಸಿಕೊಳ್ಳುವ ಸದುದ್ದೇಶದಿಂದ ತಾತ್ಕಾಲಿಕವಾಗಿ ಕಟ್ಟಡಗಳನ್ನು ಹಸ್ತಾಂತರಿಸಲು ಕೆಲವು ಸಂಸ್ಥೆಗಳ ಪ್ರಾಚಾರ್ಯರುಗಳು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಆದುದರಿಂದ, ಹಸ್ತಾಂತರಗೊಂಡಿರುವ ಹಾಸ್ಟೆಲ್‌ಗಳನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ / ಸಮಾಜ ಕಲ್ಯಾಣ ಇಲಾಖೆಗಳಿಗೆ ತಾತ್ಕಾಲಿಕವಾಗಿ ಹಸ್ತಾಂತರಿಸಲು ಸಂಸ್ಥೆಯ ಪ್ರಾಚಾರ್ಯರುಗಳು ಇಚ್ಚಿಸಿದ್ದಲ್ಲಿ ಅಥವಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ / ಸಮಾಜ ಕಲ್ಯಾಣ ಇಲಾಖೆಗಳಿಂದ ಪ್ರಸ್ತಾವನೆಗಳು ಸಂಸ್ಥೆಗಳಲ್ಲಿ ಸ್ವೀಕೃತವಾಗಿದ್ದಲ್ಲಿ ಸೂಕ್ತ ಸಮರ್ಥನೆಗಳೊಂದಿಗೆ ದಿನಾಂಕ:12-10-2021ರೊಳಗೆ ಪ್ರಸ್ತಾವನೆಗಳನ್ನು ಆಯುಕ್ತಾಲಯಕ್ಕೆ ಸಲ್ಲಿಸಲು ಸೂಚಿಸಿದೆ.

ಜಂಟಿ ನಿರ್ದೇಶಕರು (ಆಡಳಿತ)
ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ:

ಎಲ್ಲಾ ಪ್ರಾಚಾರ್ಯರು, ಸರ್ಕಾರಿ ಪಾಲಿಟೆಕ್ನಿಕ್ / ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು (ಈಗಾಗಲೇ ಪ್ರಸ್ತಾವನೆ ಸಲ್ಲಿಸಿರುವ ಸಂಸ್ಥೆಗಳು ಪುನಃ ಸಲ್ಲಿಸುವ ಅಗತ್ಯವಿಲ್ಲ)

Scanned by TapScanner